**All India Radio: Bangalore**
**National Bulletin In Kannada**
**24.05.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.05.2026 7.35 am**

**<><><*><><>**

ಮುಖ್ಯಾಂಶಗಳು

**೧. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರೊಂದಿಗೆ ಇಂದು ದ್ವಿಪಕ್ಷೀಯ ಸಭೆ ನಡೆಸಲಿರುವ ಸಚಿವ ಡಾ.ಎಸ್.ಜೈಶಂಕರ್**

**೨. ಭಾರತೀಯ ವ್ಯಾಪಾರ ನಿಯೋಗದೊಂದಿಗೆ ಕೆನಡಾಕ್ಕೆ ನಾಳೆಯಿಂದ ಮೂರು ದಿನಗಳ ಭೇಟಿ ನೀಡಲಿರುವ ಕೇಂದ್ರ ಸಚಿವ ಪಿಯೂಷ್ ಗೋಯಲ್**

**೩. ಐಪಿಎಲ್ ಟಿ-೨೦ ಕ್ರಿಕೆಟ್; ಲಖ್ನೋ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ಗೆ ೭ ವಿಕೆಟ್‌ಗಳ ಜಯ**

**೪. ೨೦೨೬ ರ ಅಥ್ಲೆಟಿಕ್ಸ್ ಫೆಡರೇಶನ್ ಕಪ್; ಗುರಿಂದರ್‌ವೀರ್ ಸಿಂಗ್ ಗೆ ಚಿನ್ನದ ಪದಕ**

**<><><*><><>**

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಇಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಪ್ರಾದೇಶಿಕ ಮತ್ತು ಜಾಗತಿಕ ಶಾಂತಿ ಮತ್ತು ಭದ್ರತೆಗೆ ಸಂಬಂಧಿಸಿದ ವಿಷಯಗಳು ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಅವರು ಚರ್ಚಿಸಲಿದ್ದಾರೆ. ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ರುಬಿಯೊ ಅವರು ನಾಲ್ಕು ದಿನಗಳ ಭೇಟಿಗಾಗಿ ನಿನ್ನೆ ಭಾರತಕ್ಕೆ ಆಗಮಿಸಿದ್ದಾರೆ. ಅವರು ನಿನ್ನೆ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ ರಕ್ಷಣೆ, ಕಾರ್ಯತಂತ್ರದ ತಂತ್ರಜ್ಞಾನಗಳು, ವ್ಯಾಪಾರ ಮತ್ತು ಹೂಡಿಕೆ, ಇಂಧನ ಭದ್ರತೆ, ಸಂಪರ್ಕ, ಶಿಕ್ಷಣ ಮತ್ತು ಜನರಿಂದ ಜನರ ನಡುವಿನ ಸಂಬಂಧಗಳು ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿನ ನಿರಂತರ ಪ್ರಗತಿಯ ಕುರಿತು ಚರ್ಚಿಸಿದರು. ಭಾರತ ಮತ್ತು ಅಮೆರಿಕ ಜಾಗತಿಕ ಒಳಿತಿಗಾಗಿ ನಿಕಟವಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು. ಶಾಂತಿ ಪ್ರಯತ್ನಗಳಿಗೆ ಭಾರತದ ಸ್ಥಿರ ಬೆಂಬಲ ಮತ್ತು ಸಂವಾದ ಮತ್ತು ರಾಜತಾಂತ್ರಿಕತೆಯ ಮೂಲಕ ಸಂಘರ್ಷಗಳ ಶಾಂತಿಯುತ ಪರಿಹಾರಕ್ಕಾಗಿ ಅವರು ಕರೆಯನ್ನು ಪುನರುಚ್ಚರಿಸಿದರು. ಪಶ್ಚಿಮ ಏಷ್ಯಾದ ಪರಿಸ್ಥಿತಿ ಸೇರಿದಂತೆ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಕಾರ್ಯದರ್ಶಿ ರುಬಿಯೊ ಅವರು ಅಮೆರಿಕದ ದೃಷ್ಟಿಕೋನವನ್ನು ಹಂಚಿಕೊಂಡರು. ಭಾರತವನ್ನು ಅಮೆರಿಕಕ್ಕೆ ಪ್ರಮುಖ ಪಾಲುದಾರ ಎಂದು ಅವರು ಕರೆದಿದ್ದಾರೆ.

**<><><*><><>**

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ನಾಳೆಯಿಂದ ಭಾರತೀಯ ವ್ಯಾಪಾರ ನಾಯಕರ ನಿಯೋಗದೊಂದಿಗೆ ಕೆನಡಾಕ್ಕೆ ಮೂರು ದಿನಗಳ ಭೇಟಿ ನೀಡಲಿದ್ದಾರೆ. ವ್ಯಾಪಾರ, ಹೂಡಿಕೆ ಮತ್ತು ಭಾರತ-ಕೆನಡಾ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಮಾತುಕತೆಗಳನ್ನು ಮುನ್ನಡೆಸಲು ಗೋಯಲ್

ಒಟ್ಟಾವಾ ಮತ್ತು ಟೊರೊಂಟೊದಲ್ಲಿ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಈ ವರ್ಷದ ಮಾರ್ಚ್‌ನಲ್ಲಿ ಪ್ರಧಾನಿ ಮಾರ್ಕ್ ಕಾರ್ನಿ ಅವರ ಭಾರತ ಭೇಟಿಯ ಸಮಯದಲ್ಲಿ ಉಲ್ಲೇಖದ ನಿಯಮಗಳಿಗೆ ಸಹಿ ಹಾಕಲಾಗಿತ್ತು. ಮೊದಲ ಸುತ್ತಿನ ಮಾತುಕತೆಗಳು ಮಾರ್ಚ್‌ನಲ್ಲಿ ವರ್ಚುವಲ್ ಆಗಿ ನಡೆದಿದ್ದವು. ಎರಡನೇ ಸುತ್ತಿನ ಮಾತುಕತೆಗಳು ಮೇ ೮ ರಂದು ಮುಕ್ತಾಯಗೊಂಡಿದ್ದವು. ಪ್ರಸ್ತುತ ಭೇಟಿಯ ಸಮಯದಲ್ಲಿ, ಒಟ್ಟಾವಾದಲ್ಲಿ ಮತ್ತಷ್ಟು ಸುತ್ತಿನ ಮಾತುಕತೆಗಳನ್ನು ನಡೆಸಲಾಗುವುದು. ೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ೭೦ ಶತಕೋಟಿ ಕೆನಡಿಯನ್ ಡಾಲರ್‌ಗಳಿಗೆ ವಿಸ್ತರಿಸುವ ಹಂಚಿಕೆಯ ಮಹತ್ವಾಕಾಂಕ್ಷೆಯೊಂದಿಗೆ, ಈ ವರ್ಷದ ಅಂತ್ಯದ ವೇಳೆಗೆ ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ಸಿಇಪಿಎಯ ಆರಂಭಿಕ ತೀರ್ಮಾನಕ್ಕೆ ಎರಡೂ ಕಡೆಯವರು ಕಾರ್ಯ ನಿರ್ವಹಿಸಲಿದ್ದಾರೆ.

<>><><*><><<>

ಆರೋಗ್ಯ ರಕ್ಷಣಾ ಮೂಲಸೌಕರ್ಯದ ಜೊತೆಗೆ, ಆರೋಗ್ಯ ತಜ್ಞರು ಮತ್ತು ವೈದ್ಯಕೀಯ ವೃತ್ತಿಪರರ ತರಬೇತಿಯೂ ಅಷ್ಟೇ ಮುಖ್ಯ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ವೈದ್ಯಕೀಯ ವಿಜ್ಞಾನ ಪರೀಕ್ಷಾ ಮಂಡಳಿಯ ೨೩ನೇ ಘಟಿಕೋತ್ಸವ ಸಮಾರಂಭವನ್ನುದ್ದೇಶಿಸಿ ಅವರು ಮಾತನಾಡಿದರು. ವೈದ್ಯರು ಆರೋಗ್ಯ ರಕ್ಷಣಾ ವ್ಯವಸ್ಥೆಯ ಸಾಫ್ಟ್‌ವೇರ್ ಆಗಿ ಸೇವೆ ಸಲ್ಲಿಸುತ್ತಾರೆ, ಆದರೆ ಮೂಲಸೌಕರ್ಯ ಮತ್ತು ಇತರ ಸೌಲಭ್ಯಗಳು ರಾಷ್ಟ್ರದ ಹಾರ್ಡ್‌ವೇರ್ ಆಗಿ ಕಾರ್ಯನಿರ್ವಹಿಸುತ್ತವೆ ಎಂದು ಹೇಳಿದ್ದಾರೆ. ದೇಶದ ಉದಯೋನ್ಮುಖ ತಜ್ಞರನ್ನು ಗೌರವಿಸುವ ಮೂಲಕ ಭಾರತ, ತನ್ನ ಆರೋಗ್ಯ ರಕ್ಷಣಾ ಪರಿಸರ ವ್ಯವಸ್ಥೆಯ ಭವಿಷ್ಯವನ್ನು ರೂಪಿಸುತ್ತಿದೆ ಎಂದು ಅವರು ತಿಳಿಸಿದ್ದಾರೆ. ದೇಶದ ಆರೋಗ್ಯ ರಕ್ಷಣಾ ಸವಾಲುಗಳನ್ನು ಎದುರಿಸುವಲ್ಲಿ ಮತ್ತು ದೇಶಾದ್ಯಂತ ಆರೋಗ್ಯ ರಕ್ಷಣಾ ವಿತರಣಾ ವ್ಯವಸ್ಥೆಗಳನ್ನು ಬಲಪಡಿಸುವಲ್ಲಿ ಈ ಯುವ ವೈದ್ಯರ ಪರಿಣತಿ, ನಾವೀನ್ಯತೆ ಮತ್ತು ಬದ್ಧತೆಯು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ. ವಿಕಸಿತ ಭಾರತ ಮಿಷನ್ ಸಾಧಿಸುವಲ್ಲಿ ಆರೋಗ್ಯ ರಕ್ಷಣಾ ವಲಯ ಮತ್ತು ಆರೋಗ್ಯಕರ ಭಾರತದ ದೃಷ್ಟಿಕೋನವು ಪ್ರಮುಖ ಪಾತ್ರ ವಹಿಸುತ್ತದೆ. ಆದ್ದರಿಂದ ವೈದ್ಯಕೀಯ ವೃತ್ತಿಪರರ ಕೊಡುಗೆ ರಾಷ್ಟ್ರಕ್ಕೆ ಬಹಳ ಮುಖ್ಯವಾಗಿದೆ ಎಂದು ಅವರು ಹೇಳಿದ್ದಾರೆ. ರೋಗಿಗಳ ಆರೈಕೆಯನ್ನು ಬಲಪಡಿಸಲು ೧೧ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ಸಮಾರಂಭದಲ್ಲಿ, ೨೬ ಸಾವಿರ ೩೯೬ ಅರ್ಹ ಅಭ್ಯರ್ಥಿಗಳಿಗೆ ಅವರ ಶೈಕ್ಷಣಿಕ ಶ್ರೇಷ್ಠತೆ, ವೈದ್ಯಕೀಯ ಪ್ರಾವೀಣ್ಯತೆ ಮತ್ತು ವೃತ್ತಿಪರ ಸಾಮರ್ಥ್ಯವನ್ನು ಗುರುತಿಸಿ ರಾಷ್ಟ್ರೀಯ ಮಂಡಳಿಯ ಡಿಪ್ಲೊಮೇಟ್, ರಾಷ್ಟ್ರೀಯ ಮಂಡಳಿಯ ಡಾಕ್ಟರೇಟ್, ಡಿಪ್ಲೊಮಾ ಮತ್ತು ರಾಷ್ಟ್ರೀಯ ಮಂಡಳಿಯ ಫೆಲೋಶಿಪ್ ಅರ್ಹತೆಗಳನ್ನು ನೀಡಲಾಯಿತು.

<>><><*><><<>

ವಿಬಿ-ಜಿ ರಾಮ್ ಜಿ ಕಾಯ್ದೆ-೨೦೨೫ ಕುರಿತಂತೆ ವ್ಯಾಪಕ ಸಾರ್ವಜನಿಕ ಸಮಾಲೋಚನೆಗಾಗಿ ಕೇಂದ್ರ ಸರ್ಕಾರ ಕರಡು ನಿಯಮಗಳನ್ನು ಪ್ರಕಟಿಸಿದೆ. ಕರಡು ನಿಯಮಗಳ ಕುರಿತು ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಯಾವುದೇ ವ್ಯಕ್ತಿ ಅಥವಾ ಭಾಗಿದಾರರು ಇಲ್ಲವೆ ಸಂಸ್ಥೆಗಳು ಮುಂದಿನ ತಿಂಗಳ ೨೧ ರೊಳಗೆ ಸಲ್ಲಿಸಬಹುದಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವಾಲಯ ತಿಳಿಸಿದೆ. ೨೦ ವರ್ಷ ಹಳೆಯದಾದ 'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ-ಮನ್ರೇಗಾ' ೨೦೦೫ ರ ಬದಲಿಗೆ ವಿಕಸಿತ ಭಾರತ- ಜಿ ರಾಮ್ ಜಿ ಕಾಯ್ದೆಯನ್ನು ಜಾರಿಗೆ ತರಲಾಗಿದೆ. ಹೊಸ ಕಾಯ್ದೆಯು, ಹಣಕಾಸು ವರ್ಷದಲ್ಲಿ ಶಾಸನಬದ್ಧ ಉದ್ಯೋಗ ಖಾತರಿಯನ್ನು ೧೦೦ ದಿನಗಳಿಂದ ೧೨೫ ದಿನಗಳಿಗೆ ಹೆಚ್ಚಿಸುವ ಗುರಿ ಹೊಂದಿದೆ. ಕರಡು ನಿಯಮಗಳನ್ನು ಸೆಕ್ಷನ್ ೩೩ ಮತ್ತು ಕಾಯ್ದೆಯ ಇತರ ಸಂಬಂಧಿತ ನಿಬಂಧನೆಗಳಿಗೆ ಅನುಗುಣವಾಗಿ ರೂಪಿಸಲಾಗಿದೆ. ಪರಿವರ್ತನಾ

ನಿಬಂಧನೆಗಳ ನಿಯಮಗಳು, ರಾಷ್ಟ್ರೀಯ ಮಟ್ಟದ ಸ್ಟೀರಿಂಗ್ ಸಮಿತಿ ನಿಯಮಗಳು, ಕೇಂದ್ರ ಗ್ರಾಮೀಣ ರೋಜ್‌ಗಾರ್ ಗ್ಯಾರಂಟಿ ಕೌನ್ಸಿಲ್ ನಿಯಮಗಳು, ಆಡಳಿತಾತ್ಮಕ ವೆಚ್ಚ ನಿಯಮಗಳು, ಕುಂದುಕೊರತೆ ಪರಿಹಾರ ನಿಯಮಗಳು ಸೇರಿದಂತೆ ಕರಡು ನಿಯಮಗಳನ್ನು ಸಮಾಲೋಚನೆಗಾಗಿ ಸಾರ್ವಜನಿಕ ವಲಯದಲ್ಲಿ ಇರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಬರುವ ಜುಲೈ ೧ ರಿಂದ ಅನುಷ್ಠಾನಗೊಳ್ಳಲು ವಿಬಿ-ಜಿ ರಾಮ್ ಜಿ ಕಾಯ್ದೆ -೨೦೨೫ ಕ್ಕೆ ಈ ತಿಂಗಳ ೧೧ ರಂದು ಅಧಿಸೂಚನೆ ಹೊರಡಿಸಲಾಗಿದೆ.

**<><><*><><<>**

ಮಹಾರಾಷ್ಟ್ರದಲ್ಲಿ, ಟಿಸಿಎಸ್ ಸಂಸ್ಥೆಗೆ ಸಂಬಂಧಿಸಿದ ಲೈಂಗಿಕ ದೌರ್ಜನ್ಯ ಮತ್ತು ಧಾರ್ಮಿಕ ಮತಾಂತರಕ್ಕೆ ಯತ್ನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಸಿಕ್ ನ್ಯಾಯಾಲಯದ ಮುಂದೆ ೧ ಸಾವಿರದ ೫೦೦ ಪುಟಗಳ ಆರೋಪಪಟ್ಟಿಯನ್ನು ಸಲ್ಲಿಸಲಾಗಿದೆ. ಎಸ್‌ಐಟಿ ಮುಖ್ಯಸ್ಥ ಸಂದೀಪ್ ಮಿಟ್ಕೆ ಅವರ ಪ್ರಕಾರ, ನಿನ್ನೆ ನಾಲ್ವರು ಆರೋಪಿಗಳಾದ ಮತಿನ್ ಪಟೇಲ್, ನಿದಾ ಖಾನ್, ಡ್ಯಾನಿಶ್ ಶೇಖ್ ಮತ್ತು ತೌಸಿಫ್ ಅತ್ತಾರ್ ವಿರುದ್ಧ ಆರೋಪಪಟ್ಟಿಯನ್ನು ಸಲ್ಲಿಸಲಾಗಿದೆ. ಅಪರಾಧಗಳಿಗೆ ಸಂಬಂಧಿಸಿದಂತೆ ಏಳರಿಂದ ಎಂಟು ವ್ಯಕ್ತಿಗಳಿಗೆ ಸಂಬಂಧಿಸಿದ ಹೆಚ್ಚುವರಿ ಆರೋಪಪಟ್ಟಿಗಳನ್ನು ಮುಂದಿನ ಮೂರು ನಾಲ್ಕು ದಿನಗಳಲ್ಲಿ ಸಲ್ಲಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

**<><><*><><<>**

ಲಖ್ನೋದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ, ಲಖ್ನೋ ಸೂಪರ್ ಜೈಂಟ್ಸ್ ತಂಡದ ವಿರುದ್ಧ ೭ ವಿಕೆಟ್‌ಗಳ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಲಖ್ನೋ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೯೬ ರನ್ ಗಳಿಸಿತು. ಲಖ್ನೋ ಪರ ಜೋಷ್ ಇಂಗ್ಲಿಸ್ ೭೨ ಹಾಗೂ ಆಯುಷ್ ಬದೋನಿ ೪೩ ರನ್ ಗಳಿಸಿದರು. ಪಂಜಾಬ್ ಪರ ಯುಜುವೇಂದ್ರ ಚಹಾಲ್ ಹಾಗೂ ಮಾರ್ಕೋ ಯಾನ್ಸನ್ ತಲಾ ೨ ವಿಕೆಟ್ ಪಡೆದರು. ಗುರಿ ಬೆನ್ನತ್ತಿದ ಪಂಜಾಬ್ ತಂಡ ನಾಯಕ ಶ್ರೇಯಸ್ ಅಯ್ಯರ್ ಅವರ ಆಕರ್ಷಕ ಶತಕದ ನೆರವಿನಿಂದ ೧೮ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೦೦ ರನ್ ಗಳಿಸುವುದರೊಂದಿಗೆ ೭ ವಿಕೆಟ್‌ಗಳ ಜಯ ಸಾಧಿಸಿತು. ಪಂಜಾಬ್ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಶ್ರೇಯಸ್ ಅಯ್ಯರ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಐಪಿಎಲ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿದ್ದು, ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯುವ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುವ ಎರಡನೇ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

**<><><*><><<>**

೨೦೨೬ ರ ಅಥ್ಲೆಟಿಕ್ಸ್ ಫೆಡರೇಶನ್ ಕಪ್‌ನಲ್ಲಿ ಗುರಿಂದರ್‌ವೀರ್ ಸಿಂಗ್ ಪುರುಷರ ೧೦೦ ಮೀಟರ್ ಓಟದಲ್ಲಿ ೧೦.೦೯ ಸೆಕೆಂಡುಗಳ ಹೊಸ ರಾಷ್ಟ್ರೀಯ ದಾಖಲೆಯೊಂದಿಗೆ ಚಿನ್ನದ ಪದಕವನ್ನು ಗೆದ್ದಿದ್ದಾರೆ. ಪುರುಷರ ೪೦೦ ಮೀಟರ್ ಓಟದಲ್ಲಿ, ವಿಶಾಲ್ ಟಿಕೆ ೪೪.೯೮ ಸೆಕೆಂಡುಗಳ ಹೊಸ ರಾಷ್ಟ್ರೀಯ ದಾಖಲೆಯೊಂದಿಗೆ ಚಿನ್ನದ ಪದಕವನ್ನು ಗೆದ್ದರು. ಈ ಸ್ಪರ್ಧೆಯಲ್ಲಿ ೪೫ ಸೆಕೆಂಡುಗಳ ತಡೆಗೋಡೆಯನ್ನು ಮುರಿದ ಮೊದಲ ಭಾರತೀಯ

ಅಥ್ಲೀಟ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಈ ನಡುವೆ ರಾಜೇಶ್ ರಮೇಶ್ ೪೫.೩೧ ಸೆಕೆಂಡುಗಳಲ್ಲಿ ಗುರಿ ತಲುಪಿ ಬೆಳ್ಳಿ ಪದಕ ಗೆದ್ದರೆ, ಜಯ್ ಕುಮಾರ್ ೪೫.೪೭ ಸೆಕೆಂಡುಗಳಲ್ಲಿ ಗುರಿ ತಲುಪಿ ಕಂಚಿನ ಪದಕ ಗೆದ್ದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ಗಂಟೆಗೆ ><><<>**